# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 223 |
| ಸದಸ್ಯರ ಹೆಸರು | : | ಶ್ರೀ ಪಿ.ಆರ್. ರಮೇಶ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 02/02/2021 |
| ಉತ್ತರಿಸುವ ಸಚಿವರು | : | ಮಾನ್ಯ ನಗರಾಭಿವೃದ್ಧಿ ಸಚಿವರು |

| ಕ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಹುಬ್ಬಳ್ಳಿ-ಧಾರವಾಡ ಬೆಳಗಾವಿ, ವಿಜಯಪುರ, ಬಳ್ಳಾರಿ, ಕಲಬುರಗಿ ಮಹಾನಗರ ಪಾಲಿಕೆಗಳಲ್ಲಿ ಸಕಾಲಕ್ಕೆ ಚುನಾವಣೆ ನಡೆಸದೆ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು: (ವಿವರ ನೀಡುವುದು) | **ಬಂದಿದೆ.**<br><br>2011ರ ಜನಗಣತಿಯನ್ನಾಧರಿಸಿ ಹುಬ್ಬಳ್ಳಿ-ಧಾರವಾಡ, ಬೆಳಗಾವಿ, ವಿಜಯಪುರ, ಬಳ್ಳಾರಿ, ಕಲಬುರಗಿ ಮಹಾನಗರ ಪಾಲಿಕೆಗಳಿಗೆ ಕ್ಷೇತ್ರ ಪುನರ್ ವಿಂಗಡಣೆ ಕೈಗೊಂಡು, ವಾರ್ಡ್‌ವಾರು ಮೀಸಲಾತಿಗಳನ್ನು ಅಧಿಸೂಚನೆ ಸಂಖ್ಯೆ: ನಅಇ 67 ಎಂಎಲ್‌ಆರ್ 2018, ದಿನಾಂಕ 10/08/2018 ರಂದು ಅಧಿಸೂಚನೆಗಳನ್ನು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿತ್ತು.<br><br>ಸದರಿ ಅಧಿಸೂಚನೆಗಳು ಮಾನ್ಯ ಉಚ್ಛ ನ್ಯಾಯಾಲಯ, ಧಾರವಾಡ ಪೀಠ ಮತ್ತು ಕಲಬುರ್ಗಿ ಪೀಠಗಳಲ್ಲಿ ಪ್ರಶ್ನಿತವಾಗಿ ತಡೆಯಾಜ್ಞೆ ಇದ್ದುದರಿಂದ ಹುಬ್ಬಳ್ಳಿ-ಧಾರವಾಡ, ಬೆಳಗಾವಿ, ವಿಜಯಪುರ, ಬಳ್ಳಾರಿ ಮತ್ತು ಕಲಬುರಗಿ ಮಹಾನಗರ ಪಾಲಿಕೆಗಳ ವಾರ್ಡ್‌ಗಳಿಗೆ ಚುನಾವಣೆ ಜರುಗಿರುವುದಿಲ್ಲ. |
| (ಆ) | ಪ್ರತಿಯೊಂದು ಪಾಲಿಕೆಯ ಅವಧಿ ಮುಗಿದಾಗಲೂ ಸಾರ್ವಜನಿಕರು ಕೋರ್ಟ್ ಮೊರೆ ಹೋಗಿ ಚುನಾವಣೆ ನಡೆಸಲು ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡುವವರೆಗೆ ಕಾಯುವ ಸರ್ಕಾರದ ಈ ವಿಳಂಬ ನೀತಿಗೆ ಕಾರಣಗಳೇನು: ಇದನ್ನು ಸರಿಪಡಿಸಲು ಸರ್ಕಾರದ ಕ್ರಮವೇನು; (ವಿವರ ನೀಡುವುದು) | ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಗೆ ಸಂಬಂಧಿಸಿದಂತೆ ಮಾನ್ಯ ಉಚ್ಛ ನ್ಯಾಯಾಲಯ, ಬೆಂಗಳೂರು ಇಲ್ಲಿ ದಾಖಲಾಗಿದ್ದ ರಿಟ್ ಅರ್ಜಿ ಸಂಖ್ಯೆ: 49814/2019 ಪ್ರಕರಣದಲ್ಲಿ ದಿನಾಂಕ 17/12/2020ರಂದು ನೀಡಿರುವ ತೀರ್ಪಿನಲ್ಲಿ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಮತ್ತು ವಿಜಯಪುರ ಮಹಾನಗರ ಪಾಲಿಕೆಗೆ 06 ವಾರದೊಳಗೆ ಕ್ಷೇತ್ರ ಪುನರ್ ವಿಂಗಡಣೆಯನ್ನು ಅಂತಿಮಗೊಳಿಸಲು, ಕ್ಷೇತ್ರ ಪುನರ್ ವಿಂಗಡಣೆ ಅಂತಿಮಗೊಂಡ ದಿನಾಂಕದಿಂದ 02 ತಿಂಗಳೊಳಗೆ ವಾರ್ಡ್‌ವಾರು ಮೀಸಲಾತಿಯನ್ನು ಅಂತಿಮಗೊಳಿಸಲು ಮಾನ್ಯ ಉಚ್ಛ ನ್ಯಾಯಾಲಯವು ನಿರ್ದೇಶನ ನೀಡಿರುತ್ತದೆ. ಮಾನ್ಯ ಉಚ್ಛ ನ್ಯಾಯಾಲಯದ ಆದೇಶದನ್ವಯ ಕ್ರಮವಹಿಸಲಾಗುತ್ತಿದೆ. |

...2

| | | |
|---|---|---|
| | | ರಿಟ್ ಅರ್ಜಿ ಸಂಖ್ಯೆ 14925/2020 ಪ್ರಕರಣದಲ್ಲಿ ದಿನಾಂಕ 17/12/2020ರಂದು ನೀಡಿರುವ ಆದೇಶದನ್ವಯ ಬೆಳಗಾವಿ ಮಹಾನಗರ ಪಾಲಿಕೆಗೆ ವಾರ್ಡ್‌ವಾರು ಮೀಸಲಾತಿಯನ್ನು 02 ತಿಂಗಳೊಳಗೆ ಪೂರ್ಣಗೊಳಿಸಲು ನಿರ್ದೇಶನ ನೀಡಿರುತ್ತದೆ.<br><br>ಕಲಬುರ್ಗಿ ಮಹಾನಗರ ಪಾಲಿಕೆಗೆ 06 ವಾರದೊಳಗೆ ಕ್ಷೇತ್ರ ಪುನರ್ ವಿಂಗಡಣೆಯನ್ನು ಅಂತಿಮಗೊಳಿಸಲು, ಕ್ಷೇತ್ರ ಪುನರ್ ವಿಂಗಡಣೆ ಅಂತಿಮಗೊಂಡ ದಿನಾಂಕದಿಂದ 02 ತಿಂಗಳೊಳಗೆ ವಾರ್ಡ್‌ವಾರು ಮೀಸಲಾತಿಯನ್ನು ಅಂತಿಮಗೊಳಿಸಲು ಮಾನ್ಯ ಉಚ್ಚ ನ್ಯಾಯಾಲಯವು ನಿರ್ದೇಶನ ನೀಡಿರುತ್ತದೆ. ಮಾನ್ಯ ಉಚ್ಚ ನ್ಯಾಯಾಲಯದ ಆದೇಶದನ್ವಯ ಕ್ರಮವಹಿಸಲಾಗುತ್ತಿದೆ.<br><br>ಬಳ್ಳಾರಿ ಮಹಾನಗರ ಪಾಲಿಕೆಗೆ ಸಂಬಂಧಿಸಿದಂತೆ ವಾರ್ಡ್‌ವಾರು ಮೀಸಲಾತಿಯನ್ನು ಪ್ರಶ್ನಿಸಿ ದಾಖಲಾಗಿದ್ದ ರಿಟ್ ಅರ್ಜಿ ಸಂಖ್ಯೆ: 106127/2018 ಪ್ರಕರಣವು ದಿನಾಂಕ 11/01/2021ರಂದು ಇತ್ಯರ್ಥಗೊಂಡಿರುತ್ತದೆ.<br><br>ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ದಾಖಲಾಗಿದ್ದ ಮೇಲ್ಕಂಡ ಎರಡು ಪ್ರಕರಣಗಳಲ್ಲಿ ನೀಡಿರುವ ಆದೇಶದನ್ವಯ ಮಹಾನಗರ ಪಾಲಿಕೆಗಳಿಗೆ ಚುನಾವಣೆ ನಡೆಸಲು ನಿಯಮಾನುಸಾರ ಅಗತ್ಯ ಕ್ರಮಕೈಗೊಳ್ಳಲಾಗುವುದು. |
| (ಇ) | ವಾರ್ಡ್ ವಿಭಜನೆ, ಮೀಸಲು ನಿಗದಿ ಮತ್ತು ಇನ್ನಿತರೆ ಕಾರ್ಯಗಳನ್ನು ಸರ್ಕಾರವು ತನ್ನ ಸುಪರ್ದಿಯಿಂದ ರಾಜ್ಯ ಚುನಾವಣಾ ಆಯೋಗಕ್ಕೆ ಹಸ್ತಾಂತರಿಸಲು ಚಿಂತನೆ ನಡೆಸಿದೆಯೇ? (ವಿವರ ನೀಡುವುದು) | ಸರ್ಕಾರದ ಮುಂದೆ ಪ್ರಸ್ತಾವನೆ ಇರುವುದಿಲ್ಲ. |

**ಸಂಖ್ಯೆ: ನಅಇ 03 ಎಲ್‌ಸಿಕ್ಯೂ 2021**

**(ಬಿ.ಎ. ಬಸವರಾಜ)**
**ನಗರಾಭಿವೃದ್ಧಿ ಸಚಿವರು**